**Bangalore**
**Regional News**
**01.02.2026 / 1840 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಕ್ಯಾನ್ಸರ್, ಮಧುಮೇಹ ಔಷಧಿಗಳ ಬೆಲೆ ಇಳಿಕೆ – ತೆರಿಗೆ ಬಾಕಿ ಉಳಿಸಿಕೊಂಡರೆ ಶೇಕಡ 100ರಷ್ಟು ದಂಡ – ಬಜೆಟ್‌ನಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ಘೋಷಣೆ
2. ಸಣ್ಣ ಮತ್ತು ಅತಿ ಸಣ್ಣ ಕೈಗರಿಕೆಗಳಿಗೆ ವಿಶೇಷ ಪ್ಯಾಕೇಜ್ – 200 ಕೈಗಾರಿಕಾ ಹಬ್ ಮೇಲ್ದರ್ಜೆಗೇರಿಸಲು ಕೇಂದ್ರ ನಿರ್ಧಾರ
3. ಖಾದಿ, ಕೈಮಗ್ಗ ಉತ್ತೇಜನಕ್ಕೆ ಗಾಂಧಿ ಗ್ರಾಮ ಸ್ವರಾಜ್ ಯೋಜನೆ – ಸಾರಿಗೆ ಕ್ಷೇತ್ರಕ್ಕೆ 5 ಲಕ್ಷದ 98 ಸಾವಿರದ 520 ಕೋಟಿ ಮೀಸಲು
4. ಗೋಡಂಬಿ, ಕೊಕ್ಕೋಗೆ ಜಾಗತಿಕ ಬ್ರ್ಯಾಂಡ್ – ಶ್ರೀಗಂಧದ ಬೆಳೆ ಉತ್ತೇಜನಕ್ಕೆ ನಿರ್ಧಾರ
5. ಕೇಂದ್ರ ಬಜೆಟ್‌ಗೆ ಮಿಶ್ರ ಪ್ರತಿಕ್ರಿಯೆ ; ರಾಜ್ಯಕ್ಕೆ ಯಾವುದೇ ಹೊಸ ಯೋಜನೆ ಘೋಷಿಸಿಲ್ಲ ; ಬಸವರಾಜ ರಾಯರೆಡ್ಡಿ ಅಸಮಾಧಾನ

*****************

ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಇಂದು 2026–27ನೇ ಸಾಲಿನ ಆಯವ್ಯಯ ಮಂಡಿಸಿದರು. ಸತತ 9ನೇ ಬಾರಿಗೆ ಬಜೆಟ್ ಮಂಡಿಸುವ ಮೂಲಕ ಈ ಬಾರಿ ದಾಖಲೆ ಬರೆದಿದ್ದಾರೆ.

ಏಪ್ರಿಲ್ 1 ರಿಂದ ನೂತನ ಆದಾಯ ತೆರಿಗೆ ಕಾಯ್ದೆ ಜಾರಿಗೆ ಬರಲಿದೆ. ಜಿಎಸ್‌ಟಿ ಸರಳೀಕರಣಕ್ಕೆ ಕೇಂದ್ರ ಸರ್ಕಾರ ಕ್ರಮಕೈಗೊಂಡಿದೆ. ವಿದೇಶಿ ಪ್ರವಾಸ ಇನ್ನು ಮುಂದೆ ಅಗ್ಗವಾಗಲಿದೆ.

ಅಪಘಾತ ವಿಮೆ ಪರಿಹಾರ ಪಡೆಯಲು ಇನ್ನು ಮುಂದೆ ತೆರಿಗೆ ವಿಧಿಸದಿರಲು ನಿರ್ಧರಿಸಲಾಗಿದೆ. ಜುಲೈ 31ರವರೆಗೆ ಆದಾಯ ತೆರಿಗೆ ಸಲ್ಲಿಕೆಗೆ ಅವಕಾಶ ನೀಡಲಾಗಿದೆ.

ತೆರಿಗೆ ಬಾಕಿ ಉಳಿಸಿಕೊಳ್ಳುವವರಿಗೆ ಶೇಕಡ 100ರಷ್ಟು ದಂಡ ವಿಧಿಸುವ ಎಚ್ಚರಿಕೆಯನ್ನು ಕೇಂದ್ರ ಸರ್ಕಾರ ನೀಡಿದೆ. ತೆರಿಗೆ ಪಾವತಿಸದವರನ್ನು ಅಪರಾಧಿಗಳನ್ನಾಗಿ ಪರಿಗಣಿಸಲು ನಿರ್ಧರಿಸಲಾಗಿದೆ.

*****************

ಇಂದಿನಿಂದ ಮದ್ಯದ ಬೆಲೆಯನ್ನು ಏರಿಕೆ ಮಾಡಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಬಜೆಟ್‌ನಲ್ಲಿ ಸಿಗರೇಟ್, ತಂಬಾಕು ಮತ್ತು ಪಾನ್‌ಮಸಾಲಾ ಉತ್ಪನ್ನಗಳ ಬೆಲೆ ಏರಿಕೆ ಮಾಡಲಾಗಿದೆ.

ಆಮದು ಮಾಡಿಕೊಳ್ಳುವ ಯಂತ್ರೋಪಕರಣಗಳು ವಿದೇಶದಿಂದ ಆಮಾದಾಗುವ ಪ್ಲಾಸ್ಟಿಕ್ ವಸ್ತುಗಳ ಬೆಲೆ ಏರಿಸಲಾಗಿದೆ.

ಕ್ಯಾನ್ಸರ್‌ನ 17 ಔಷಧಿಗಳಿಗೆ ವಿನಾಯಿತಿ ಘೋಷಣೆ ಮಾಡಲಾಗಿದೆ. ಕ್ಯಾನ್ಸರ್ ಸೇರಿ 7 ಅಪರೂಪದ ಕಾಯಿಲೆಗಳ ಔಷಧಿಗಳ ದರದಲ್ಲಿ ಕಡಿತ ಮಾಡಲಾಗಿದೆ. ಪ್ರಮುಖವಾಗಿ ಮಧುಮೇಹಕ್ಕೆ ಸಂಬಂಧಿಸಿದ ಔಷಧಿಗಳ ಬೆಲೆಯನ್ನು ಇಳಿಕೆ ಮಾಡಲಾಗಿದೆ.

ಬೀಡಿ, ಜವಳಿ, ಸೋಲಾರ್ ವಸ್ತುಗಳು ಹಾಗೂ ಚರ್ಮದ ಉತ್ಪನ್ನಗಳ ಬೆಲೆ, ಸೆಣಬು, ಸಿಎನ್‌ಜಿ ಇಂಧನ ದರ ಇಳಿಕೆ ಮಾಡಲಾಗಿದೆ. ಲಿಥಿಯಂ ಬ್ಯಾಟರಿ ಹಾಗೂ ವಿಮಾನ ಇಂಧನ ದರದಲ್ಲಿ ಇಳಿಕೆ ಮಾಡಲಾಗಿದೆ.

*****************

ದೇಶದಾದ್ಯಂತ 7 ಹೈಸ್ಪೀಡ್ ರೈಲು ಕಾರಿಡಾರ್ ಸ್ಥಾಪಿಸುವುದಾಗಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ. ದೇಶದ ಸಾರಿಗೆ ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ಹಿನ್ನೆಲೆಯಲ್ಲಿ ಬೆಂಗಳೂರು, ಹೈದರಾಬಾದ್, ಚೆನ್ನೈ. ಪುಣೆಯಲ್ಲಿ 7 ಹೈಸ್ಪೀಡ್ ರೈಲು ಕಾರಿಡಾರ್ ನಿರ್ಮಾಣವಾಗಲಿದೆ.

ದೇಶದ ಪ್ರಮುಖ ನಗರಗಳನ್ನು ಸಂಪರ್ಕಿಸಲು ಮುಂಬೈ–ಪುಣೆ, ಪುಣೆ–ಹೈದರಾಬಾದ್, ಹೈದರಾಬಾದ್–ಬೆಂಗಳೂರು, ಚೆನ್ನೈ–ಬೆಂಗಳೂರು, ಹೈದರಾಬಾದ್–ಚೆನ್ನೈ, ದೆಹಲಿ–ವಾರಾಣಸಿ, ವಾರಾಣಸಿ–ಸಿಲಿಗುರಿ ಹೈಸ್ಪೀಡ್ ರೈಲು ಮಾರ್ಗಗಳನ್ನು ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ.

*****************

ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಿಗೆ ಕೇಂದ್ರ ಸರ್ಕಾರದಿಂದ ವಿಶೇಷ ಪ್ಯಾಕೇಜ್ ಘೋಷಿಸಿದ್ದಾರೆ. ದೇಶದಾದ್ಯಂತ 200 ಕೈಗಾರಿಕಾ ಹಬ್‌ಗಳನ್ನು ಮೇಲ್ದರ್ಜೆಗೇರಿಸುವುದಾಗಿ ಘೋಷಿಸಿದ್ದಾರೆ.

ದೇಶೀಯ ಉತ್ಪಾದನೆಯನ್ನು ಹೆಚ್ಚಿಸಲು ಆಮದು ಅವಲಂಬನೆಯನ್ನು ಕಡಿಮೆ ಮಾಡಲು ಮೂರು ಮೀಸಲಾದ ರಾಸಾಯನಿಕ ಪಾರ್ಕ್‌ಗಳನ್ನು ಸ್ಥಾಪಿಸುವ ಪ್ರಸ್ತಾವವನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ್ದಾರೆ.

ಹೊಸದಾಗಿ ಖೆಲೋ ಇಂಡಿಯಾ ಮಿಷನ್ ಸ್ಥಾಪನೆಗೆ ಕೇಂದ್ರ ಸರ್ಕಾರ ನಿರ್ಧರಿಸಿದೆ. ಕ್ರೀಡಾಪಟುಗಳಿಗೆ ತರಬೇತಿ, ಮೂಲಸೌಕರ್ಯ ಹೆಚ್ಚಿಸಲು ಬಜೆಟ್‌ನಲ್ಲಿ ಸಚಿವರು ತಿಳಿಸಿದ್ದಾರೆ.

*****************

ಕೇಂದ್ರ ಸರ್ಕಾರ ಕರಾವಳಿ ಜನರಿಗೆ ಸಿಹಿಸುದ್ದಿ ನೀಡಿದೆ. ಪ್ರಮುಖವಾಗಿ ತೆಂಗು ಕೃಷಿ ಅಭಿವೃದ್ಧಿಗೆ ನಿರ್ಮಲಾ ಸೀತಾರಾಮನ್ ನೂತನ ಯೋಜನೆ ಘೋಷಿಸಿದ್ದಾರೆ. ಕರಾವಳಿ ಪ್ರದೇಶಗಳಲ್ಲಿ ತೆಂಗು, ಗೇರುಬೀಜ, ಕೊಕ್ಕೋ, ಉತ್ತೇಜನಕ್ಕೆ ನಿರ್ಧರಿಸಿರುವ ಅವರು, ತೆಂಗಿನಕಾಯಿ, ಸಂಸ್ಕರಣೆ ಹಾಗೂ ರಫ್ತಿಗೆ ಆದ್ಯತೆ ನೀಡಿದ್ದಾರೆ.

ಜಾಗತಿಕ ಬ್ರ್ಯಾಂಡ್‌ಗಳಾಗಿ ಗೋಡಂಬಿ ಮತ್ತು ಕೊಕ್ಕೋವನ್ನು ಪರಿವರ್ತಿಸಲು ನಿರ್ಧರಿಸಲಾಗಿದೆ.

ರಾಜ್ಯದ ಪ್ರಮುಖ ಟ್ರೇಡ್‌ಮಾರ್ಕ್ ಆದ ಶ್ರೀಗಂಧದ ಬೆಳೆಯನ್ನು ಹೆಚ್ಚಿಸಲು ಕೇಂದ್ರ ಸರ್ಕಾರ ಆದ್ಯತೆ ನೀಡಿದೆ.

*****************

ಆಮೆಗಳ ವೀಕ್ಷಣಾ ಹಾದಿ ಯೋಜನೆಯಡಿ ಒಡಿಶಾ ಮತ್ತು ಕೇರಳದ ಜೊತೆಗೆ ರಾಜ್ಯದ ಕರಾವಳಿ ಪ್ರದೇಶಗಳಲ್ಲಿ ಸಂತಾನೋತ್ಪತ್ತಿ ತಾಣಗಳಲ್ಲಿ ಆಮೆ ವೀಕ್ಷಣಾ ಪ್ರವಾಸೋದ್ಯಮ ಅಭಿವೃದ್ಧಿಪಡಿಸಲಾಗುವುದು ಎಂದು ಬಜೆಟ್‌ನಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ.

ಪರಿಸರ ಸ್ನೇಹಿ ಚಾರಣ ಮತ್ತು ಹೈಕಿಂಗ್‌ಗಾಗಿ ಪಶ್ಚಿಮ ಘಟ್ಟಗಳಲ್ಲಿ ವಿಶೇಷ ಟ್ರೇಲ್‌ಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದ್ದಾರೆ. ಇದೇ ವೇಳೆ ಕಾಫಿ ಸಂಸ್ಕರಣಾ ಯಂತ್ರಗಳ ಮೇಲಿನ ಸುಂಕಗಳಿಗೆ ವಿನಾಯಿತಿ ಘೋಷಿಸಿಲಾಗಿದ್ದು, ಕಾಫಿ ರೋಸ್ಟಿಂಗ್ ಯಂತ್ರಗಳಿಗೆ ಉತ್ತೇಜನ ನೀಡಲಾಗಿದೆ. ಇದರಿಂದ ಕಾಫಿ ಬೆಳೆಯುವ ರಾಜ್ಯದ ಬೆಳೆಗಾರರಿಗೆ ಲಾಭವಾಗಲಿದೆ.

*****************

ಈ ಬಾರಿಯ ಬಜೆಟ್‌ನಲ್ಲಿ ಸಾರಿಗೆ ಕ್ಷೇತ್ರಕ್ಕೆ 5 ಲಕ್ಷದ 98 ಸಾವಿರದ 520 ಕೋಟಿ, ರಕ್ಷಣಾ ಕ್ಷೇತ್ರಕ್ಕೆ 5 ಲಕ್ಷದ 94 ಸಾವಿರದ 585 ಕೋಟಿ ಮೀಸಲಿಡಲಾಗಿದೆ.

ಗ್ರಾಮೀಣಾಭಿವೃದ್ಧಿಗೆ 2 ಲಕ್ಷದ 73 ಸಾವಿರದ 108 ಕೋಟಿ,

ಕೃಷಿ ಹಾಗೂ ಪೂರಕ ಕ್ಷೇತ್ರಗಳಿಗೆ 1 ಲಕ್ಷದ 62 ಸಾವಿರದ 671 ಕೋಟಿ,

ಶಿಕ್ಷಣಕ್ಕೆ 1 ಲಕ್ಷದ 39 ಸಾವಿರದ 289 ಕೋಟಿ,

ಆರೋಗ್ಯ ಕ್ಷೇತ್ರಕ್ಕೆ 1 ಲಕ್ಷದ 4 ಸಾವಿರದ 599 ಕೋಟಿ,

ಹಣಕಾಸು ಕ್ಷೇತ್ರಕ್ಕೆ 20 ಸಾವಿರದ 649 ಕೋಟಿ,

ಮಾಹಿತಿ ತಂತ್ರಜ್ಞಾನ ಮತ್ತು ದೂರಸಂಪರ್ಕ ಕ್ಷೇತ್ರಕ್ಕೆ 74 ಸಾವಿರದ 560 ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ.

*****************

ಈ ಬಾರಿಯ ಬಜೆಟ್‌ನಲ್ಲಿ ರಕ್ಷಣಾ ಕ್ಷೇತ್ರಕ್ಕೆ 6.8 ಲಕ್ಷ ಕೋಟಿ ರೂಪಾಯಿಗಳ ಹಣವನ್ನು ಮೀಸಲಿಡಲಾಗಿದೆ. ಇದು ಕಳೆದ ವರ್ಷಕ್ಕಿಂತ ಸುಮಾರು ಶೇಕಡ 9.53ರಷ್ಟು ಹೆಚ್ಚಳವಾಗಿದೆ. ದೇಶದ ಒಟ್ಟು ಬಜೆಟ್‌ನ ಸುಮಾರು ಶೇಕಡ 13.45 ರಷ್ಟು ಭಾಗವನ್ನು ರಕ್ಷಣಾ ಕ್ಷೇತ್ರಕ್ಕೆ ನೀಡಲಾಗಿದೆ.

ಬಂಡವಾಳ ವೆಚ್ಚದ ಭಾಗವಾಗಿ ಮಿಲಿಟರಿ ಹಾರ್ಡ್‌ವೇರ್ ಖರೀದಿಗೆ ರಕ್ಷಣಾ ಪಡೆಗಳಿಗೆ 2.19 ಲಕ್ಷ ಕೋಟಿ ಹಂಚಿಕೆ ಮಾಡಲಾಗಿದೆ.

*****************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಬಜೆಟ್‌ನಲ್ಲಿ ದೇಶದ ಮುಂದಿನ ಭವಿಷ್ಯದ ಬಗ್ಗೆ ಯೋಜನೆಗಳಿಲ್ಲ ಹಾಗೂ ಯಾವುದೇ ಸ್ಪಷ್ಟ ಯೋಜನೆಗಳನ್ನು ದೇಶಕ್ಕೆ ನೀಡಿಲ್ಲ ಎಂದು ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕಕ್ಕೆ ಯಾವುದೇ ಹೊಸ ಯೋಜನೆಗಳನ್ನು ನೀಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹಿರಿಯ ಆರ್ಥಿಕತಜ್ಞ ನಾರಾಯಣ ಯಾಜಿ ಬಜೆಟ್ ವಿಶ್ಲೇಷಿಸಿ ಮಾತನಾಡಿ, ಪಶುಸಂಗೋಪನೆ, ಮೀನುಗಾರಿಕೆ, ಗೋಡಂಬಿ ಬೆಳೆ ಉತ್ತೇಜನಕ್ಕೆ ಕೇಂದ್ರ ಸರ್ಕಾರ ಮುಂದಾಗಿರುವುದು ಶ್ಲಾಘನೀಯ ಎಂದು ತಿಳಿಸಿದ್ದಾರೆ.

ಧ್ವನಿ : ನಾರಾಯಣ ಯಾಜಿ

ಈ ಬಾರಿಯ ಬಜೆಟ್ ದೇಶದ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಮಂಗಳೂರಿನ ಸಾಮಾಜಿಕ ಕಾರ್ಯಕರ್ತ ಮೋಹನ್ ದಾಸ್ ಮರಕಡ ಅಭಿಪ್ರಾಯ ಪಟ್ಟಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಆಮದು ಔಷಧಗಳ ತೆರಿಗೆ ಕಡಿಮೆ ಮಾಡಿರುವುದರಿಂದ ಜನಸಾಮಾನ್ಯರಿಗೆ ಹೆಚ್ಚು ಅನುಕೂಲವಾಗಲಿದೆ. ಕ್ಯಾನ್ಸರ್ ನಂತಹ ಔಷಧಿಗಳ ಮೇಲಿನ ತೆರಿಗೆ ಕಡಿಮೆ ಮಾಡಿರುವುದರಿಂದ ಕ್ಯಾನ್ಸರ್ ರೋಗಿಗಗಳ ಚಿಕಿತ್ಸೆಗೆ ಪೂರಕವಾಗಲಿದೆ ಎಂದು ಹೇಳಿದ್ದಾರೆ.

ಧ್ವನಿ : ಮೋಹನ್ ದಾಸ್ ಮರಕಡ

*****************

ಕೇಂದ್ರ ಸರ್ಕಾರ ಮಂಡಿಸಿರುವ ಬಜೆಟ್ ಇಡೀ ದೇಶದ ಅಭಿವೃದ್ಧಿಗೆ ಪೂರಕವಾಗಿದ್ದು, ದೇಶದ ವಿವಿಧ ವಲಯಗಳಲ್ಲಿ ಮಹಿಳೆಯರು ಸ್ವಾವಲಂಬಿಯಾಗಿ ಬದುಕುವುದಕ್ಕೆ ಸಹಕಾರ ನೀಡಿದೆ ಎಂದು ಎಫ್‌ಕೆಸಿಸಿಐ ಅಧ್ಯಕ್ಷೆ ಉಮಾ ರೆಡ್ಡಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದಾಯ ತೆರಿಗೆ ನಮೂನೆಗಳನ್ನು ಸರಳೀಕರಿಸಲಾಗಿದ್ದು ಇದು ತೆರಿಗೆದಾರರಿಗೆ ಸಹಕಾರವಾಗಲಿದೆ ಎಂದು ಹೇಳಿದ್ದಾರೆ.

ಧ್ವನಿ : ಉಮಾರೆಡ್ಡಿ

*****************

ಇಂಡಿಯಾ ಸೆಮಿಕಂಡಕ್ಟರ್ ಮಿಷನ್ 2.0 ಪ್ರಾರಂಭಿಸುವುದಾಗಿ ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ.

ಸಂಶೋಧನೆ ಮತ್ತು ತರಬೇತಿ ಕೇಂದ್ರ ಮೇಲೆ ಅರೆವಾಹಕ ಕಾರ್ಯಾಚರಣೆಯ ವೆಚ್ಚವನ್ನು 40 ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲು ನಿರ್ಧರಿಸಿದ್ದಾರೆ.

ಸ್ಥಳೀಯ ಉತ್ಪಾದನೆ ಮತ್ತು ನಾವೀನ್ಯತೆಯನ್ನು ಬಲಪಡಿಸಲು ಎಲೆಕ್ಟ್ರಾನಿಕ್ಸ್ ಘಟಕ ತಯಾರಿಕೆಯ ವೆಚ್ಚವನ್ನು 40 ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ.

********ಮುಕ್ತಾಯ*********